ಮಂಜೂರು ಮಾಡುವ ಕೊಪ್ಪಳ ನಗರಕ್ಕೆ ಸಂಚಾರಿ ಪೊಲೀಸ್ ಠಾಣೆಯನ್ನು ಮಂಜೂರು ಮಾಡಲು ಪರಿಗಣಿಸಲಾಗುವುದು.

ಕೊಪ್ಪಳ ನಗರಕ್ಕೆ ಹೊಸ ವೈದ್ಯಕೀಯ ಕಾಲೇಜು ಮಂಜೂರಾತಿ

149 (256) ಶ್ರೀ ಶ್ರೀಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ): ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕೊಪ್ಪಳ ನಗರಕ್ಕೆ ಹೊಸ ವೈದ್ಯಕೀಯ ಕಾಲೇಜು ತುಂಬಾ ಅವಶ್ಯಕವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸದರಿ ಕಾಲೇಜುಗಳನ್ನು ಪ್ರಸಕ್ತ ಸಾಲಿನಲ್ಲಿ ಪ್ರಾರಂಭಿಸಲಾಗುವುದೇ;

ಇ) ಸದರಿ ಕಾಲೇಜಿಗೆ ನಿಗದಿಪಡಿಸಲಾಗಿರುವ ಅನುದಾನದ ಮೊತ್ತವೆಷ್ಟು;

ಈ) ಈ ಭಾಗದಲ್ಲಿ ಹೊಸ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಿದರೆ ಕೊಪ್ಪಳ ತಾಲ್ಲೂಕು ಹೈದರಾಬಾದ್ ಕರ್ನಾಟಕ ಕೇಂದ್ರ ಸ್ಥಾನವಾಗುವುದರಿಂದ ಈ ಭಾಗದ ವಿದ್ಯಾರ್ಥಿಗಳಿಗೆ ತುಂಬಾ ಪ್ರಯೋಜನಕಾರಿಯಾಗುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಉ) ಹಾಗಿದ್ದಲ್ಲಿ, ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಹಾಕಿಕೊಂಡಿರುವ ಕಾರ್ಯಕ್ರಮಗಳೇನು?

ಶ್ರೀ ಎ. ರಾಮದಾಸ್ (ವೈದ್ಯಕೀಯ ಶಿಕ್ಷಣ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ

ಈ) ಇಲ್ಲ.

ಉ) ಉದ್ಭವಿಸುವುದಿಲ್ಲ.

ವಿದ್ಯಾರ್ಥಿ ನಿಲಯಗಳ ಮಂಜೂರಾತಿ ಬಗ್ಗೆ

150 (257) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ): ಮಾನ್ಯ ಸಮಾಜ ಕಲ್ಯಾಣ ಮತ್ತು ಬಂದೀಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?